ಇ) ಹೆಗ್ಗಡದೇವನಕೋಟೆ ತಾಲ್ಲೂಕಿನಲ್ಲಿ ಈಗಾಗಲೇ ನಿರ್ಮಿಸಿರುವ ನುಗು ಜಲಾಶಯದ ಮೇಲ್ದಂಡೆಯಲ್ಲಿ ಒಂದು ಜಲಾಶಯವನ್ನು ನಿರ್ಮಿಸಿ ಬಲದಂಡೆಯಲ್ಲಿ 40.470 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸುವುದು.

2. ಕಬಿನಿ ಸಮಗ್ರ ಯೋಜನೆ ಅಂದಾಜು ವೆಚ್ಚ 471 ಕೋಟಿ ರೂಪಾಯಿಗಳು ಒಟ್ಟು 87.900 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ದೊರಕುವುದು.

3. ಪ್ಯಾರಾ 1 (ಅ)ದಲ್ಲಿ ಸೂಚಿಸಿರುವ ಕಬಿನಿ ಯೋಜನೆಯನ್ನು ಈ ಸಮಗ್ರ ಯೋಜನೆಯ ಮೊದಲಿನ ಹಂತವಾಗಿ ಕೈಗೊಳ್ಳಲಾಗಿದ್ದು ಜಲಾಶಯ ಎಡದಂಡೆ ನಾಲೆ ಮತ್ತು ಬಲದಂಡೆ ನಾಲೆಯ ಬಹುಪಾಲು ಕೆಲಸಗಳು ಮುಗಿದಿದ್ದು 1-4-91ರವರೆಗೆ 40,895 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸಾಮರ್ಥ್ಯವನ್ನು ಕಲ್ಪಿಸಲಾಗಿದೆ ಮತ್ತು 157.44 ಕೋಟಿ ರೂಪಾಯಿಗಳ ವೆಚ್ಚ ಮಾಡಲಾಗಿದೆ. ಉಳಿಕೆ ಕೆಲಸ ಪ್ರಗದಿಯಲ್ಲಿವೆ.

4. ಪ್ಯಾರಾ 1 (ಅ) ಮತ್ತಿ (ಇ)ರಲ್ಲಿ ಸೂಚಿಸಿರುವ ಕಾಮಗಾರಿಗಳನ್ನು ಇನ್ನೂ ಕೈಗೆತ್ತಿಕೊಳ್ಳಬೇಕಾಗಿದೆ.

ಗ್ರಾಮೀಣ ಪ್ರದೇಶಗಳ ಪ್ರಮುಖ ರಸ್ತೆಗಳ ಪಟ್ಟಿ

2458 - ಶ್ರೀ ಎಲ್.ಆರ್. ಶಿವರಾಮೇಗೌಡ : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಗ್ರಾಮೀಣ ಪ್ರದೇಶಗಳ ಪ್ರಮುಖ ರಸ್ತೆಗಳನ್ನು ಜಿಲ್ಲಾ ಪರಿಷತ್ತಿನಿಂದ ಲೋಕೋಪಯೋಗಿ ಇಲಾಖೆಗೆ ವಹಿಸುವ ವಿಚಾರ ಸರ್ಕಾರದ ಮುಂದಿದೆಯೇ?

ಆ) ಜಿಲ್ಲಾ ಪರಿಷತ್‌ನಲ್ಲಿ ಹಣ ಅಭಾವವಿರುವುದರಿಂದ ರಸ್ತೆಗಳ ದುರಸ್ತಿ ಕಾರ್ಯ ಸರಿಯಾಗಿ ಆಗದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಈ ರಸ್ತೆಗಳನ್ನು ಲೋಕೋಪಯೋಗಿ ಇಲಾಖೆಗೆ ವಹಿಸುವ ಕುರಿತು ಸರ್ಕಾರದ ನಿರ್ದಿಷ್ಟ ನಿಲುವೇನು?

ಶ್ರೀ ಜಿ.ಹೆಚ್. ಅಶ್ವತ್ಥ ರೆಡ್ಡಿ (ಲೋಕೋಪಯೋಗಿ ಸಚಿವರು)

ಅ) ಇದೆ

ಆ) ಬಂದಿದೆ

ಇ) ಜಿಲ್ಲಾ ಪರಿಷತ್ತಿನ ವ್ಯಾಪ್ತಿಯಿಂದ ಸುಮಾರು 6000 ಕಿ.ಮಿ. ರಸ್ತೆಯನ್ನು ಮೇಲ್ದರ್ಜೆಗೆ ಏರಿಸಿ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ತೆಗೆದುಕೊಳ್ಳುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ದಕ್ಷಿಣ ಕನ್ನಡದ ಸರಪಾಡಿ ಅಣೆಕಟ್ಟು

2456 - ಶ್ರೀ ಬಿ.ಎಂ. ಇದಿನಬ್ಬ (ಉಳ್ಳಾಲ) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ದಕ್ಷಿಣ ಕನ್ನಡ ಸರಪಾಡಿ ಯೋಜನೆ ಈಗ ಯಾವ ಹಂತದಲ್ಲಿದೆ;

ಆ) ಈ ಅಣೆಕಟ್ಟು ನಿರ್ಮಾಣದಿಂದ ಸೌಲಭ್ಯ ಪಡೆಯುವ ಗ್ರಾಮಗಳ ಮತ್ತು ಒಟ್ಟು ಜನರ ಸಂಖ್ಯೆ ಎಷ್ಟು;

ಇ) ಈ ಅಣೆಕಟ್ಟು ನಿರ್ಮಾಣದಿಂದ ಮುಳುಗಡೆ ಯಾಗುವ ದೇವಾಲಯ ಗುಡಿ ಹಾಗೂ ಮಸೀದಿಗಳ ಸಂಖ್ಯೆ ಎಷ್ಟು;